# ಅವರ ಮುಖಕ್ಕೆ ಕನ್ನಡಿ ತೋರಿಸಿದ್ದೇನೆ–ಜಗದೀಶ್ ಶೆಟ್ಟರ್‌ಗೆ ಲಕ್ಷ್ಮೀ ಹೆಬ್ಬಾಳಕರ್ ತಿರುಗೇಟು

ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಕಾಂಗ್ರೆಸ್ ಪಕ್ಷದವರು ನನ್ನ ಬಗ್ಗೆ ಅಪಪ್ರಚಾರ ಮಾಡುತ್ತಿದ್ದಾರೆ ಎನ್ನುವ ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಹೇಳಿಕೆಗೆ ಲಕ್ಷ್ಮೀ ಹೆಬ್ಬಾಳಕರ್ ತಿರುಗೇಟು ನೀಡಿದ್ದಾರೆ.

ಬೆಳಗಾವಿಯಲ್ಲಿ ಮಾಧ್ಯಮಗಳಿಗೆ ಅವರು ಪ್ರತಿಕ್ರಿಯೆ ನೀಡಿದರು. ನಾನೇನು ಅಪಪ್ರಚಾರ ಮಾಡುತ್ತಿಲ್ಲ. ನಾನು ಅವರ ಮುಖಕ್ಕೆ ಕನ್ನಡಿ ತೋರಿಸುತ್ತಿದ್ದೇನೆ ಅಷ್ಟೇ ಎಂದು ಹೆಬ್ಬಾಳಕರ್ ಹೇಳಿದರು.

ನನ್ನ ಜೀವನದಲ್ಲಿ ಇಂತದ್ದನ್ನು ನೋಡಿಲ್ಲ ಎಂದು ಶೆಟ್ಟರ್ ಹೇಳಿದ್ದಾರಲ್ಲ ಎನ್ನುವ ಪ್ರಶ್ನೆಗೆ, ಅವರ ಜೀವನದಲ್ಲಿ ಈ ರೀತಿ ನೋಡಿಲ್ಲ ಎಂದರೆ ಅದಕ್ಕೆ ಉತ್ತರ ಕೊಡಲು ಆಗುವುದಿಲ್ಲ. ಅವರು ಜೀವನದಲ್ಲಿ ಏನು ಮಾಡಿದ್ದಾರೆ ಎಂದು ನಾನು ಕೇಳಲು ಬಯಸುತ್ತೇನೆ. ನಾವು ಬೆಳಗಾವಿಯವರು. ಬೆಳಗಾವಿಯ ಜನರು ಅವರನ್ನು ಹೊರಗೆ ಕಳಿಸಲು ಈಗಾಗಲೆ ನಿರ್ಧಾರ ಮಾಡಿಯಾಗಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ಸೋಲಿನ ಹತಾಶೆಯಿಂದ ಈ ರೀತಿ ಸುಳ್ಳು ಹೇಳುತ್ತಿದ್ದಾರೆ ಎನ್ನುವ ಶೆಟ್ಟರ್ ಮಾತಿಗೆ, ಅದು ಜೂನ್ 4ರಂದು ಗೊತ್ತಾಗುತ್ತದೆ ಎಂದರು. ಎಐಸಿಸಿ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಭೇಟಿ ಕುರಿತು ಪ್ರಶ್ನಿಸಿದಾಗ, ಬೆಳಗಾವಿ ಲೋಕಸಭಾ ಕ್ಷೇತ್ರ ಮತ್ತು ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಯಾವ ರೀತಿಯ ವಾತಾವರಣವಿದೆ, ಕೊನೆಯ ಕ್ಷಣದ ಮಾಹಿತಿ ಏನದೆ ಎಂದು ನೋಡಿಕೊಂಡು ಹೋಗಲು ಅವರು ಆಗಮಿಸಿದ್ದಾರೆ. ಅನೇಕ ವಿಷಯಗಳನ್ನು ಅವರೊಂದಿಗೆ ಚರ್ಚಿಸಲಾಗಿದೆ ಎಂದು ಸಚಿವರು ತಿಳಿಸಿದರು.

# ಬೆಳಗಾವಿ ದಕ್ಷಿಣ ಕ್ಷೇತ್ರದಲ್ಲಿ ಸಚಿವರಿಂದ ಮತಯಾಚನೆ ಮರಾಠ ಸಮುದಾಯದಿಂದ ಕಾಂಗ್ರೆಸ್‌ಗೆ ಭಾರಿ ಬೆಂಬಲ



ಬೆಳಗಾವಿ: ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ವಡಗಾಂವ ಹಾಗೂ ಪೀರನವಾಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಪರ ಪ್ರಚಾರ ನಡೆಸಿದರು.

ವಡಗಾಂವನ ಅನುಸೂಯ ಸಭಾಂಗಣದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿದ ಸಚಿವರು, ಕಾಂಗ್ರೆಸ್ ಬೆಂಬಲಿಸುವಂತೆ ಮನವಿ ಮಾಡಿದರು. ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಉತ್ತಮ ಅಭ್ಯರ್ಥಿ ಆಗಿದ್ದು, ಎಲ್ಲರನ್ನೂ ಒಟ್ಟಿಗೆ ಕೊಂಡೊಯ್ಯುವ ಸಾಮರ್ಥ್ಯ ಹೊಂದಿದ್ದಾನೆ ಎಂದು ಹೇಳಿದರು.

ಬಳಿಕ ಪೀ?ರನವಾಡಿಯಲ್ಲಿ ಮತಯಾಚಿಸಿದ ಸಚಿವರು, ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಬಡಜನರಿಗೆ ಸಾಕಷ್ಟು ಅನುಕೂಲ ಆಗಿದೆ. ಪೀರನವಾಡಿ ಕಾಂಗ್ರೆಸ್ ಪಕ್ಷದ ಭದ್ರ ಕೋಟೆ, ಈ ಭಾಗದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಮತಗಳನ್ನು ನಿರೀಕ್ಷಿಸಲಾಗಿದೆ ಎಂದು ಹೇಳಿದರು.

ಈ ವೇಳೆ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವಿಗೆ ಉತ್ತಮ ವಾತಾವರಣವಿದ್ದು, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ ಗೆಲುವಿಗೆ ಎಲ್ಲರೂ ಒಟ್ಟಾಗಿ ಕೆಲಸ ಮಾಡೋಣ ಎಂದು ಕರೆ ನೀಡಿದರು. ಈ ಪ್ರದೇಶದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಭಾರೀ ಬೆಂಬಲ ವ್ಯಕ್ತವಾಯಿತು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪರಶುರಾಮ ಡಗೆ, ಪ್ರದೀಪ್.ಎಂ.ಜೆ.ಅಮೂಲ ದೇಸಾಯಿ, ಮಹಾದೇವ ಗಡ್ಕರಿ, ಸಾಕ್ಷಿ ಕಣಬರಕರ, ಮಾಧುರಿ ಮಿರ್ಜೆ, ಮಹೇಶ್ ಪಾಟೀಲ್, ಸಚಿನ್ ಗೋರ್ಲೆ, ಪೀರಾಜಿ ಸೂಳಗೇಕರ್, ಪ್ರಮೋದ್ ಪಾಟೀಲ್, ವಿಠಲ್ ಸಾಂಬ್ರೇಕರ್, ಮಲ್ಲಿಕಾರ್ಜುನ ಕೊಡಗೂರು,ಮಹಾಂತೇಶ್ ಕರಿಗಾರ್ , ರಾಜು ಕಡೋಲ್ಕರ್, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತರ ಮುಖಂಡರಿಂದ ಲೋಕಸಭಾ ಬಿಜೆಪಿ ಅಭ್ಯರ್ಥಿ ಶ್ರೀರಾಮುಲು ಪರವಾಗಿ ಮತಯಾಚನೆ



ಬಳ್ಳಾರಿ ಏ–ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ 9ನೇ ವಾರ್ಡ್‌ನ ಸೋಸೈಟಿ ರೈಸ್ ಮಿಲ್ ಗ್ರಾಂಡ್ ಫಂಕ್ಷನ್ ಹಾಲ್ ಹತ್ತಿರದಲ್ಲಿರುವ ನಬಿ ಕಾಲೋನಿಯ ಸುತ್ತಮುತ್ತಲಿನ ಮನೆ ಮನೆಗೆ ಬಿಜೆಪಿ ಅಲ್ಪಸಂಖ್ಯಾತರ ಜಿಲ್ಲಾಧ್ಯಕ್ಷರಾದ ಇಬ್ರಾಹಿಂ ಬಾಬು ಅವರ ನೇತೃತ್ವದಲ್ಲಿ

ಈ ಬಾರಿ ದೇಶಕ್ಕೆ ಮೋದಿ ಬಳ್ಳಾರಿಗೆ ಶ್ರೀರಾಮುಲು ಅವರನ್ನು ಗೆಲ್ಲಿಸೋಣ ಎಂಬ ಘೋಷ ವಾಕ್ಯದೊಂದಿಗೆ ಗಲ್ಲಿ ಗಲ್ಲಿಯಲ್ಲಿ ಅಲ್ಪಸಂಖ್ಯಾತರನ್ನು ಒಗ್ಗೂಡಿಸಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಶ್ರೀರಾಮುಲು ಪರವಾಗಿ ಮತಪ್ರಚಾರ ನಡೆಸಿದರು. ಈ ಸಂದರ್ಭದಲ್ಲಿ ವಕ್ಫ್ ಬೋರ್ಡ್ ಮಾಜಿ ಅಧ್ಯಕ್ಷರಾದ ರಿಜ್ವಾನ್,ಅಲ್ಪಸಂಖ್ಯಾತರ ಬಿಜೆಪಿ ಮುಖಂಡರಾದ ಮುನ್ನ ಬಾಯ್, ಗುಜುರಿ ಅಜೀಜ್, ಸರ್ವೆ ಅಯೂಬ್, ಸುನಾರ್ ದಾದು, ಮುನೀರ್, ಫಾರುಕ್ ಭಾಯ್ ರಫೀಕ್ ಜಾಕಿರ್ ಸೇರಿದಂತೆ ಅನೇಕ ಬಿಜೆಪಿ ಕಾರ್ಯಕರ್ತರು ಮತ್ತು ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಬಿಜೆಪಿ ವರ್ತನೆ, ಭಾಷೆ ನೋಡಿದರೆ ಅವರ ಸಂಸ್ಕಾರ ಅರ್ಥವಾಗುತ್ತದೆ : ಜ್ಯೋತಿ



ಕೊಪ್ಪಳ : ರಾಜ್ಯದಲ್ಲಿ ಬಿಜೆಪಿ ಈ ಬಾರಿ ಎರಡಂಕಿ ದಾಟುವದು ಕಷ್ಟ ಎಂದು ಗೊತ್ತಾದ ಕೂಡಲೇ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ತಮ್ಮ ಹೊಲಸಾಟ ಶುರು ಮಾಡಿದ್ದು, ಅದರ ನಾಯಕರು ಬಾಯಿಗೆ ಬಂದಿದ್ದನ್ನು ಮಾತನಾಡುತ್ತಿದ್ದಾರೆ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ಗ್ಯಾರಂಟಿ ಸಮಿತಿ ಸದಸ್ಯೆ ಜ್ಯೋತಿ ಎಂ. ಗೊಂಡಬಾಳ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅವರು ನಗರದ ಅನೇಕ ವಾರ್ಡುಗಳಲ್ಲಿ ಕಾಂಗ್ರೆಸ್ ಪರವಾಗಿ ಪ್ರಚಾರ ಮಾಡಿ ಈ ವಿಷಯಗಳನ್ನು ಪ್ರಸ್ತಾಪ ಮಾಡಿದ್ದಾರೆ. ಬಿಜೆಪಿ ತನ್ನ ವಾಟ್ಸಾಪ್ ಯೂನವರ್ಷಿಟಿ ಮೂಲಕ ಜನರಿಗೆ ಮನಸೋ ಇಚ್ಛೆ ಸುಳ್ಳು ಸುದ್ದಿಗಳನ್ನು ಹರಡುತ್ತಿದ್ದು ಅದೂ ಸಾಲದೆಂಬಂತೆ ಕೆಟ್ಟ ಪದಗಳ ಮೂಲಕ ರಾಜ್ಯದ ಕಾಂಗ್ರೆಸ್ ನಾಯಕರನ್ನು ಮಹಿಳೆಯರನ್ನು ಜರಿಯುತ್ತಿದ್ದಾರೆ.ಮಾಜಿ ಸಿಎಂ ಕುಮಾರಸ್ವಾಮಿ ತಮ್ಮ ಮಾತುಗಳ ಮೂಲಕ ಸುಮಾರಸ್ವಾಮಿಯಾಗಿದ್ದು, ಎರಡು ಸಾವಿರ ರೂಪಾಯಿ ಸರಕಾರದಿಂದ ಪಡೆದು ಮಹಿಳೆಯರು ಅಡ್ಡ ದಾರಿ ಹಿಡಿದಿದ್ದಾರೆ ಎನ್ನುತ್ತಾರೆ ಜೊತೆಗೆ ಅದನ್ನು ಸಮರ್ಥನೆ ಮಾಡಿಕೊಳ್ಳುತ್ತಾರೆ ಅದರ ಕುರಿತು ದೇವೇಗೌಡರು, ಯಡಿಯೂರಪ್ಪರು ಸಹ ಯಾವುದೇ ಸ್ಪಷ್ಟೀಕರಣ ಕೊಡುತ್ತಿಲ್ಲ ಅಂದರೆ ಅವರು ಸಹ ಇಂತಹ ಮಾತಿಗೆ ಒಪ್ಪಿಗೆ ಹೊಂದಿದ್ದಾರೆ ಎಂದು ಅರ್ಥವೇ?ಇನ್ನು ನಟಿ ಶೃತಿ ಸಹ ತಮ್ಮ ನಾಲಿಗೆ ಹರಿಬಿಟ್ಟಿದ್ದು ಮಹಿಳೆಯರು ಉಚಿತ ಶಕ್ತಿ ಯೋಜನೆ ಮೂಲಕ ತಮ್ಮ ಗಂಡಂದಿರಿಗೆ ಸುಳ್ಳು ಹೇಳಿ ಎಲ್ಲೆಲ್ಲೋ ಹೋಗುತ್ತಿದ್ದಾರೆ, ತೀರ್ಥ ಯಾತ್ರೆ ಮಾಡುತ್ತಿಲ್ಲ ಬೇರೆ ಎಲ್ಲೋ ಹೋಗುತ್ತಿದ್ದು ಗಂಡಂದಿರು ಕಣ್ಣೀರು ಹಾಕುತ್ತಿದ್ದಾರೆ ಎನ್ನುವದನ್ನು ನೋಡಿದರೆ ಅವರಿಗೆ ನಟಿ ಶಿರೋಮಣಿ ಪ್ರಶಸ್ತಿ ಕೊಡಬೇಕು ಎಂದಿದ್ದಾರೆ.

ಇನ್ನು ಸಿಟಿ ರವಿ ಎಂಬ ಮನುಷ್ಯ ಸಹ ನಾಲಿಗೆ ಹರಿಬಿಟ್ಟಿದ್ದು ಅವರಿಗೆ ಬುದ್ಧಿಭ್ರಮಣೆಯಾಗಿದೆ, ಅಲ್ಲದೇ ಯಡಿಯೂರಪ್ಪರ ಸುಪುತ್ರ ವಿಜಯೇಂದ್ರ ಕಾಂಗ್ರೆಸ್‌ನ ನಾಯಕ, ಸಚಿವ ಬಡವರ ಕಲ್ಯಾಣಕ್ಕೆ ದುಡಿಯುತ್ತಿರುವ ಸಂತೋಷ ಲಾಡ ಅವರನ್ನು ನಂದಿಸಿದ್ದಕ್ಕೆ ಕೂಡಲೇ ಕ್ಷಮೆ ಕೋರಬೇಕು. ಈ ಎಲ್ಲ ಮುಖಂಡರು ರಾಜ್ಯದ ಜನರ ಕ್ಷಮೆ ಕೋರಬೇಕು ವಿಶೇಷವಾಗಿ ಮಹಿಳೆಯರ ಕ್ಷಮೆ ಕೋರಬೇಕು ಎಂದು ಒತ್ತಾಯಿಸಿದರು.ದೇಶದ ಪ್ರಧಾನಿಗಳು ಸಹ ಇಲ್ಲಸಲ್ಲದ ಮಾತುಗಳನ್ನು ಆಡುತ್ತಿದ್ದರೂ, ಧರ್ಮ ಸಂಘರ್ಷದ ಮೂಲಕ ಕೋಮು ಸೌಹಾರ್ದಕ್ಕೆ ದಕ್ಕೆ ತರುವ ಮಾತನಾಡುತ್ತಿದ್ದರೂ ಅವರ ಮೇಲೆ ಕ್ರಮ ತೆಗೆದುಕೊಳ್ಳದ ಚುನಾವಣೆ ಆಯೋಗದ ಮೇಲೆ ನಂಬಿಕೆ ಹೋಗುತ್ತಿದೆ, ಇದು ಪ್ರಜಾಪ್ರಭುತ್ವದ ಕೊಲೆ ಎಂದು ಭಾವಿಸಬೇಕಿದೆ ಎಂದ ಅವರು ಜನರು ದೇಶದ ರಕ್ಷಣೆಗೆ ಕಾಂಗ್ರೆಸ್‌ಗೆ ಮತ ಹಾಕಬೇಕು ಎಂದು ವಿನಂತಿಸಿದ್ದಾರೆ.

ಈ ಸಂದರ್ಭದಲ್ಲಿ ಶಾಸಕ ಕೆ. ರಾಘವೇಂದ್ರ ಹಿಟ್ನಾಳ, ಮುಖಂಡರಾದ ಅಮರೇಶ ಕರಡಿ, ಅಮ್ಜದ್ ಪಟೇಲ್, ಮುತ್ತುರಾಜ ಕುಷ್ಟಗಿ, ಗುರುರಾಜ ಹಲಗೇರಿ, ಅಕ್ಬರ್ ಪಾಶಾ ಪಲ್ಟನ್, ವಿರುಪಾಕ್ಷಪ್ಪ ಮೋರನಾಳ, ಮಂಜುನಾಥ ಜಿ. ಗೊಂಡಬಾಳ, ರವಿ ಕುರಗೋಡ ಯಾದವ, ಕೆಡಿಪಿ ಸದಸ್ಯೆ ನಾಗರತ್ನ ಹುಲಗಿ, ಮಹಿಳಾ ಮುಖಂಡರಾದ ಅಂಬಿಕಾ ನಾಗರಾಳ, ಕಿಶೋರಿ ಬೂದನೂರ ಇದ್ದರು.

# ಜೆಇಇ ಎರಡನೇಯ ಅವಧಿಯ 2023–2024ನೇ ಸಾಲಿನ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ



ಕೆ.ಎಲ್.ಇ ಸಂಸ್ಥೆಯ ಸ್ವತಂತ್ರ ಪದವಿಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಜೆಇಇ ಎರಡನೇಯ ಅವಧಿಯ 2023–2024ನೇ ಸಾಲಿನ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ವಿಷಯವಾರು ಟಾಪ್ ಪರ್ಸ್‌ಂಟೈಲ್ ರಸಾಯನಶಾಸ್ತ್ರದಲ್ಲಿ 99.91, ಭೌತಶಾಸ್ತ್ರದಲ್ಲಿ 99.51 ಮತ್ತು ಗಣಿತ ವಿಷಯದಲ್ಲಿ 99.16 ಪರ್ಸ್‌ಂಟೈಲ್ ಸಾಧನೆಯನ್ನು ಮಾಡಿದ್ದಾರೆ. ಅತ್ಯುನ್ನತ ಸಾಧನೆ ಮಾಡಿದ ವಿದ್ಯಾರ್ಥಿಗಳಾದ ಚಿನ್ಮಯಿ ಸಿದ್ದಾಪೂರ 98.79, ಸೃಷ್ಟಿ ರಾಯ 98.40, ಸೃಷ್ಟಿ ಹವಾಲದಾರ 98.14, ಅಶುತೋಷ ಪೊರವಾಲ್ 98.08, ಎಸ್ ದಿವ್ಯಾ 97.83, ಚಿನ್ಮಯ ಹಿರೇಮಠ 97.02, ಪರ್ಸ್‌ಂಟೈಲ್ ಪಡೆದಿದ್ದಾರೆ. ಒಟ್ಟಾರೆಯಾಗಿ 4 ವಿದ್ಯಾರ್ಥಿಗಳು 98 ಕ್ಕಿಂತ ಹೆಚ್ಚು, 6 ವಿದ್ಯಾರ್ಥಿಗಳು 97 ಕ್ಕಿಂತ ಹೆಚ್ಚು, 12 ವಿದ್ಯಾರ್ಥಿಗಳು 93 ಕ್ಕಿಂತ ಹೆಚ್ಚು ಪರ್ಸ್‌ಂಟೈಲ್ ಅಂಕಗಳನ್ನು ಪಡೆದು ಮಹಾವಿದ್ಯಾಲಯಕ್ಕೆ ಕೀರ್ತಿಯನ್ನು ತಂದಿದ್ದಾರೆ. ಸೃಷ್ಟಿ ಹವಾಲದಾರ 98.14 ಆಖಿಖ 188 (Category*) ಮತ್ತು ಪ್ರಜ್ವಲ ಬಿಜಲಿ ಆಖಿಖ 384(Category*) ರ್‍ಯಾಂಕನ್ನು ಪಡೆದಿದ್ದಾರೆ ಈ ಎಲ್ಲ ವಿದ್ಯಾರ್ಥಿಗಳಿಗೆ ಕೆ.ಎಲ್.ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ. ಪ್ರಭಾಕರ ಕೋರೆಯವರು, ಮತ್ತು ಸ್ಥಾನಿಕ ಆಡಳಿತ ಮಂಡಳಿ ಚೆರಮನ್‌ರಾದ ಶ್ರೀ. ಮಹಾಂತೇಶ ಎಮ್ ಕವಟಗಿಮಠ, ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು ಹಾಗೂ ಎಲ್ಲ ಉಪನ್ಯಾಸಕರು ಸಿಬ್ಬಂದಿಗಳು ಹರ್ಷ ವ್ಯಕ್ತ ಪಡಿಸಿದ್ದಾರೆ.

# ಬಳ್ಳಾರಿಯಲ್ಲಿ ಬುಡಾ ಕಚೇರಿಯ ಲಂಚಕೋರ ಅಧಿಕಾರಿಗಳು ಲೋಕಾಯುಕ್ತ ಬಲೆಗೆ



ಬಳ್ಳಾರಿ ಏ –:ಬಳ್ಳಾರಿ ನಗರದ 20 ಎಕರೆ ಜಮೀನನ್ನು ಲೇಔಟ್ ಆಗಿ ಅಭಿವೃದ್ದಿ ಮಾಡಲು ಪ್ರಾವಿಜನಲ್ ಅನುಮೋದನೆ ನೀಡಲು ಲಕ್ಷ ಲಕ್ಷ ರೂ ಲಂಚ ಪಡೆದ ಮೂವರು ಅಧಿಕಾರಿಗಳು, ಸಾವಿರಾರು ರೂಪಾಯಿ ಪಡೆದ ಮೂವರು ಸಿಬ್ಬಂದಿಯನ್ನು ಇಂದು ನಡೆದ ಲೋಕಾಯುಕ್ತ ದಾಳಿಯಲ್ಲಿ ಲಂಚದ ಹಣ ಸಮೇತ ಬಂಧಿಸಲಾಗಿದೆ.

ಈರೇಶ್ ಎಂಬ ವ್ಯಕ್ತಿ ಲೇಔಟ್ ಅಭಿವೃದ್ಧಿಗೆ ಅರ್ಜಿ ಸಲ್ಲಿಸಿದ್ದರು. ಆದರೆ ಅದಕ್ಕೆ ಅನುಮೋದನೆ ನೀಡಲು ವಿಳಂಬ ಮಾಡಿ. ಲಂಚ ನೀಡಿದರೆ ಮಾತ್ರ ಅನುಮೋದನೆ ನೀಡಲಿದೆಂದು ಮಾತುಕತೆ ನಡೆಸಿದ್ದರು. ಈ ಬಗ್ಗೆ ಈರೇಶ್ ಲೋಕಾಯುಕ್ತರಿಗೆ ದೂರು ನೀಡಿದ್ದರು.ಪ್ರಕರಣ ದಾಖಲಿಸಿಕೊಂಡು ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದಾಗ ಬಳ್ಳಾರಿಯ ನಗರಾಭಿವೃದ್ದಿ ಪ್ರಾಧಿಕಾರ(ಬುಡಾ) ಆಯುಕ್ತ ರಮೇಶ ವಟಗಲ್ 5 ಲಕ್ಷ ಲಂಚ ಸ್ವೀಕರಿಸುತ್ತಿದ್ದಾಗ. ನಗರ ಯೋಜನಾ ಸದಸ್ಯ ಕಲ್ಲಿನಾಥ, 6 ಲಕ್ಷ ಲಂಚದ ಬೇಡಿಕೆ ಇಟ್ಟ ಹಿನ್ನೆಲೆಯಲ್ಲಿ.ಬುಡಾದ ನಗರ ಯೋಜನಾ ಸಹಾಯಕಿ ಯಶಸ್ವಿನ 3 ಲಕ್ಷ ರೂ ಲಂಚ ನೀಡಬೇಕೆಂದು ಬೇಡಿಕೆ ಇಟ್ಟಿದ್ದರು.

ಇನ್ನು ಫೋನ್ ಪೇನಲ್ಲಿ 10 ಸಾವಿರ ಲಂಚದ ಹಣ ಪಡೆದ ಬುಡಾ ಮ್ಯಾನೇಜರ್ ನಾರಾಯಣ, ಅದೇ ರೀತಿ ಫೋನ್ ಪೇ ಮೂಲಕ 20 ಸಾವಿರ ಪಡೆದು. 60 ಸಾವಿರಕ್ಕೆ ಲಂಚದ ಬೇಡಿಕೆ ಇಟ್ಟಿದ್ದ ಕೇಸ್ ವರ್ಕರ್ ಶಂಕರ್,ಖಾಜಾ ಹುಸೇನ್, ಜೂನಿಯರ್ ಇಂಜಿನಿಯರ್ , ಫೋನ್ ಪೇ ಮೂಲಕ 20 ಲಂಚ ಕ್ಕಾಗಿ ಬೇಡಿಕೆ ಇಟ್ಟಿದ್ದ ಇವರನ್ನು ಬಂಧಿಸಲಾಗಿದೆ. ಎಂಬ ಮಾಹಿತಿ ತಿಳಿದು ಬಂದಿದೆ.

# ನೇಹಾ ಹತ್ಯೆ: ಆರೋಪಿಗೆ ಗಲ್ಲು ಶಿಕ್ಷೆ ನೀಡಲು ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ




ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆಯ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಬೇಕು. ಈ ವ್ಯಕ್ತಿಗೆ ಸಹಕರಿಸಿದ ವ್ಯಕ್ತಿಗಳಿಗೂ ಸೂಕ್ತ ಶಿಕ್ಷೆ ನೀಡುವ ಮೂಲಕ ಆಕೆಯ ಸಾವಿಗೆ ನ್ಯಾಯ ದೊರಕಿಸಿಕೊಡಬೇಕೆಂದು ಒತ್ತಾಯಿಸಿ ತಾಲೂಕು ವೀರಶೈವ ಲಿಂಗಾಯತ ಸಂಘದಿಂದ ಪಟ್ಟಣದಲ್ಲಿ ಬುಧವಾರ ಪ್ರತಿಭಟನೆ ಹಮ್ಮಿಕೊಳ್ಳಲಾಯಿತು.

ಸಂಘದ ಪದಾಧಿಕಾರಿಗಳು, ಸದಸ್ಯರು ಕಪ್ಪು ಪಟ್ಟಿಯನ್ನು ಧರಿಸಿ, ಸಂಘದ ಕಚೇರಿಯಿಂದ ತಾಲೂಕು ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆಯನ್ನು ನಡೆಸಿ, ತಮ್ಮ ಮನವಿ ಪತ್ರವನ್ನು ತಹಶೀಲ್ದಾರ್ ಜಿ. ಅನಿಲ್‌ಕುಮಾರ್ ಮೂಲಕ ರಾಜ್ಯಪಾಲರಿಗೆ ಸಲ್ಲಿಸಿದರು.

ಬಳಿಕ ಮಾತನಾಡಿದ ಸಂಘದ ಅಧ್ಯಕ್ಷ ಚಿತ್ರಿಕಿ ಸತೀಶಕುಮಾರ್, ನೇಹಾ ಹತ್ಯೆ ಅಮಾನವೀಯ ಹಾಗೂ ನಾಗರಿಕ ಸಮಾಜ ತಲೆತಗ್ಗಿಸುವಂತಹ ಕೃತ್ಯವಾಗಿದೆ. ಆರೋಪಿಗೆ ಗಲ್ಲು ಶಿಕ್ಷೆ ವಿಧಿಸುವ ಮೂಲಕ ಇಂತಹ ದುಷ್ಕೃತ್ಯಗಳು ಇನ್ನು ಮುಂದೆ ನಡೆಯದಂತೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಸಿದರು. ಸಂಘದ ಕಾರ್ಯದರ್ಶಿಗಳಾದ ಜಿ.ವಿರೇಶ್, ಕಿನ್ನೂರೇಶ್ವರ ಮಾತನಾಡಿ, ಬೇರೆ ರಾಜ್ಯಗಳಲ್ಲಿ ಇಂತಹ ಹೇಯ ಕೃತ್ಯಗಳನ್ನು ಎಸಗುವವರಿಗೆ ಮರಣದಂಡನೆ ಶಿಕ್ಷೆ ನೀಡುವಂತೆ, ರಾಜ್ಯದಲ್ಲಿಯೂ ಸೂಕ್ತ ಕಾನೂನನ್ನು ರೂಪಿಸಿ, ಇಂತಹ ದುಷ್ಕರ್ಮಿಗಳಿಗೆ ಮರಣ ದಂಡನೆ ಅಥವಾ ಶೂಟೌಟ್ ನಂತಹ ಶಿಕ್ಷೆ ನೀಡಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ಮಂಜುಳಾ, ಶಿವಲೀಲಾ ಬಿ.ಜಿ. ಮಂಜು ವೀರೇಶ್ ಮಾತನಾಡಿ, ನೇಹಾ ಹಿರೇಮಠ್ ಅವರನ್ನು ಹತ್ಯೆಗೈದ ಆರೋಪಿಗೆ ಕಠಿಣ ಶಿಕ್ಷೆಯಾಗಬೇಕು. ಅಪರಾಧಿಗಳಿಗೆ ಉಗ್ರ ಶಿಕ್ಷೆಯಾಗುವವರೆಗೆ ನಮ್ಮ ಹೋರಾಟ ಮುಂದುವರೆಯಲಿದೆ. ಸರ್ಕಾರ ಇಂತಹ ದುಷ್ಕರ್ಮಿಗಳಿಗೆ ಮರಣ ದಂಡನೆ ಶಿಕ್ಷೆ ವಿಧಿಸಿದರೆ ಮಾತ್ರ, ಇದು ಇತರರಿಗೆ ಪಾಠವಾಗಲಿದೆ. ಇಂತಹ ದುಷ್ಕೃತ್ಯಗಳು ನಿಲ್ಲಲಿವೆ. ಸರ್ಕಾರ ನೇಹಾ ಹತ್ಯೆ ಆರೋಪಿಗೆ ಗಲ್ಲು ಶಿಕ್ಷೆ ನೀಡಬೇಕು ಎಂದು ಆಗ್ರಹಿಸಿದರು.

ಸಂಘದ ಉಪಾಧ್ಯಕ್ಷ ಪಿ.ರವಿಕುಮಾರ್, ನಿರ್ದೇಶಕ ರುದ್ರಗೌಡ, ಮುಖಂಡರಾದ ಜಿ. ಏಕಾಂಬ್ರಪ್ಪ, ಜಿ.ಟಿ. ಪಂಪಾಪತಿ, ಕಿನ್ನೂರೇಶ್ವರ, ಮೇಲುಸೀಮೆ ಶಂಕ್ರಪ್ಪ, ವಿಜಯಕುಮಾರ್, ವಿಶ್ವಮೂರ್ತಿ, ಬಿ.ಜಿ. ಸಿದ್ದೇಶ್, ಗಡಂಬ್ಲಿ ಚನ್ನಬಸಪ್ಪ, ಭುವನೇಶ್ ಮೇಟಿ, ಅರಳಿ ಕುಮಾರಸ್ವಾಮಿ, ವಿ.ಜೆ. ಶ್ರೀಪಾದಸ್ವಾಮಿ, ಟಿ.ಎಂ. ಶಿವಕುಮಾರ್, ಎಂ.ವಿ. ಹಿರೇಮಠ, ಬಿ.ಎಂ.ಮಹಾಂತೇಶ್, ಮಲ್ಲಿಕಾರ್ಜುನ, ಎಚ್.ಎಂ.ಸುರೇಶ್, ದಕ್ಷಿಣಮೂರ್ತಿ, ಹೇಮಲತಾ, ಮಧುಮತಿ, ಗೋನಾಳ್ ನಿರ್ಮಲಾ, ಎಸ್.ಡಿ. ಪ್ರೇಮಲೀಲಾ, ನಾಗವೇಣಿ, ಪುಷ್ಪಾವತಿ, ಎಚ್.ಎಂ. ವಿಜಯಲಕ್ಷ್ಮಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಅಭ್ಯರ್ಥಿಗಳ ಚುನಾವಣಾ ವೆಚ್ಚಗಳ ಲೆಕ್ಕ ಪತ್ರ ತಪಾಸಣೆ

ವಿಜಯಪುರ: ಏಪ್ರೀಲ್ – : ವಿಜಯಪುರ ಪರಿಶಿಷ್ಟ ಜಾತಿ ಮೀಸಲು ಲೋಕಸಭಾ ಮತಕ್ಷೇತ್ರಕ್ಕೆ ಸ್ಪರ್ಧಿಸಿರುವ ಅಭ್ಯರ್ಥಿಗಳ ಲೆಕ್ಕಪತ್ರವನ್ನು ಜನಪ್ರತಿನಿಧಿಗಳ ಕಾಯ್ದೆ 1951 ರ ಕಲಂ 77 (1)ರ ಪ್ರಕಾರ ವೆಚ್ಚ ವೀಕ್ಷಕರು ತಪಾಸಣೆ ನಡೆಸಲಿದ್ದಾರೆ.

ಮೊದಲನೇ ತಪಾಸಣೆ ಏಪ್ರೀಲ್ 26, ಎರಡನೇ ತಪಾಸಣೆ ಮೇ 1 ಹಾಗೂ ಮೂರನೇ ತಪಾಸಣೆ ಮೇ 5 ರಂದು ಬೆಳಿಗ್ಗೆ 11 ಗಂಟೆಯಿಂದ ಮಾಡಲಾಗುತ್ತಿದೆ. ಈ ದಿನಗಳಂದು ಅಭ್ಯರ್ಥಿಗಳು ತಮ್ಮ ಚುನಾವಣಾ ಏಜೆಂಟರುಗಳ ಮೂಲಕ ಬಿಳಿ ಬಣ್ಣದ ದೈನಂದಿನ ಖರ್ಚು ವೆಚ್ಚಗಳ ಪುಸ್ತಕ ಭಾಗ–ಎ, ಗುಲಾಬಿ ಬಣ್ಣದ ನಗದು ಪುಸ್ತಕ ಭಾಗ–ಬಿ ಮತ್ತು ಹಳದಿ ಬಣ್ಣದ ಬ್ಯಾಂಕ್ ನಗದು ಪುಸ್ತಕ, ಭಾಗ–ಸಿ ಪುಸ್ತಕಗಳನ್ನು ಕಾಲೋಚಿತಗೊಳಿಸಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆಯುವ ಅಭ್ಯರ್ಥಿಗಳ ಲೆಕ್ಕ ಪತ್ರಗಳ ತಪಾಸಣೆಗೆ ಅಭ್ಯರ್ಥಿಗಳು/ ಚುನಾವಣಾ ಏಜೆಂಟರುಗಳು ಕಡ್ಡಾಯವಾಗಿ ಹಾಜರಾಗುವಂತೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ಭೂಬಾಲನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೋಲಾಗುತ್ತಿದ್ದ 5 ಎಂ.ಎಲ್.ಡಿ ನೀರನ್ನು ಯಶಸ್ವಿ ಮರುಬಳಕೆಗೆ ಸಮರ್ಪಕವಾಗಿ ನೀರು ಸರಬರಾಜು ಪೈಪಿನ ಬಳ್ಳಿಗಳಿಗೆ ಹರಿಸಿದ ಎಲ್ & ಟಿ

ಬೆಳಗಾವಿ: ಸಾಮಾನ್ಯವಾಗಿ ಯಾವುದೇ ನಗರದಲ್ಲಿ ನೀರು ಪೋಲಾಗದೇ, ನೀರು ಸರಬರಾಜು ಮಾಡುವುದು ಅಸಾಧ್ಯವೆಂಬ ಮಾತು ಜನನಿತವಾಗಿದೆ. ಕನಿಷ್ಠ ಪಕ್ಷ 40% ರಷ್ಟು ನೀರು ಪೈಪನ ಸೋರಿಕೆಯಿಂದಲೇ ಪೋಲಾಗುತ್ತಿದೆ. ಇದಕ್ಕೆ ಬೆಳಗಾವಿ ನಗರವೂ ಹೊರತೇನಲ್ಲ. ಬೆಳಗಾವಿ ನಗರದ ಲಕ್ಷ್ಮಿ ಟೆಕ್ ನೀರು ಸಂಸ್ಕರಣಾ ಘಟಕದಿಂದ ಬ್ಯಾಕ್ ವಾಶ್ ಅದ ನೀರು ಪ್ರತಿ ದಿನ 5 ಎಂಎಲ್‌ಡಿ ಯಷ್ಟು ನೀರು ಹೊರಗಡೆ ಪೋಲಾಗುತ್ತಿತ್ತು.

ಆರಂಭದಲ್ಲಿ ನೀರು ನಿರ್ವಹಣೆಯನ್ನು ಎಲ್ &ಟಿ ಕಂಪನಿಗೆ ಹಸ್ತಾಂತರಗೊಳಿಸಿದಾಗ, ನೀರು ಸೋರಿಕೆಯಿಂದ ಪೋಲಾಗುವುದನ್ನು ತಡೆಗಟ್ಟುವುದೇ ಒಂದು ಸವಾಲಾಗಿತ್ತು. ಇದರಿಂದ ನಗರಕ್ಕೆ ಸಮರ್ಪಕವಾಗಿ ನೀರು ಸರಬರಾಜು ಮಾಡುವುದೂ ಕೂಡ ಮತ್ತೊಂದು ಸವಾಲಾಗಿತ್ತು. ಈ ಹಿನ್ನಲೆಯಲ್ಲಿ ನಗರದಲ್ಲಿ ಯಾವ ಭಾಗದಲ್ಲಿ ನೀರು ಪೋಲಾಗುತ್ತಿದೆ ಎಂಬುದನ್ನು ಕಂಡುಹಿಡಿಯಲು ಸಾಕಷ್ಟು ಸಮಯ ಬೇಕಾಯಿತು.

ತರುವಾಯ ನೀರು ಸರಬರಾಜು ವ್ಯವಸ್ಥೆಯ ಹೃದಯ ಭಾಗವಾದ ನೀರು ಸಂಸ್ಕರಣಾ ಘಟಕದಲ್ಲಿಯೇ ಬಹುಪಾಲು ನೀರು ವ್ಯರ್ಥವಾಗುತ್ತಿರುವುದು ಕಂಡು ಬಂದಿತು. ಸುಮಾರು 5 ಎಂ.ಎಲ್.ಡಿಯಷ್ಟು ನೀರು ಹರಿದು ಹೋಗಿ ಆ ಭಾಗದ ಕೆಲವರ ಮನೆಯಲ್ಲಿ ನೀರು ಸೀಪೇಜ್ ಆಗುವುದರ ಬಗ್ಗೆ, ಹಾಗೂ ನಿಮ್ಮಿಂದ ತೊಂದರೆಯಾಗುತ್ತಿದೆಯೆಂದು ಎಂ ಇ ಎಸ್ ನಿಂದ ದೂರು ಬಂದಾಗ, ಇದು ಹೇಗೆ ಸಾಧ್ಯ? ನಮಗೇ ನೀರು ಸಾಕಾಗುತ್ತಿಲ್ಲ ಹೇಗೇ ಪೋಲಾಗುತ್ತಿದೆ ಎಂಬುದರ ಬಗ್ಗೆ ಇಡೀ ವ್ಯವಸ್ಥೆಯನ್ನು ಅಧ್ಯಯನ ಮಾಡಲಾಯಿತು. ಆ ಪ್ರಕಾರ ಕಂಡುಬಂದ ಅಂಶವೆಂದರೆ ಬ್ಯಾಕ ವಾಶ್ ಆದ ನೀರು ಬೇರೆ ಬೇರೆ ಮಾರ್ಗವಾಗಿ ಹರಿದು ಹೋಗುತ್ತಿತ್ತು. ಹೀಗಾಗಿ ಹೊಸದಾಗಿ ಲಕ್ಷ್ಮಿಟೆಕ್ ದಲ್ಲಿ ಬ್ಯಾಕ್ ವಾಶ್ ಅದ ನೀರು ಬೇರೆ ಬೇರೆ ಮಾರ್ಗವಾಗಿ ಹೋಗುವುದನ್ನು ತಡೆಗಟ್ಟಿ ಹೊಸ ಪೈಪ ಲೈನ ನಿರ್ಮಾಣ ಮಾಡಿ, ಚೇಂಬರ್‌ಗಳನ್ನು ಕಟ್ಟಿ, ಬ್ಯಾಕ ವಾಶ್ ಆದ ನೀರು ಮರುಬಳಕೆಗಾಗಿ ಒಂದು ರಿಸೈಕ್ಲಿಂಗ್ ಟ್ಯಾಂಕ್‌ಗೆ ಬಂದು ಸೇರುವಂತೆ ಯೋಜಿಸಿ, ವ್ಯವಸ್ಥೆಯನ್ನು ನಿರ್ಮಾಣ ಮಾಡಲಾಯಿತು. 3 ಹಂತದಲ್ಲಿ ನೀರನ್ನು ಸಂಸ್ಕರಿಸಿ ರಿಸೈಕ್ಲಿಂಗ್ ಟ್ಯಾಂಕಿನಲ್ಲಿರುವ 40 ಹೆಚ್ ಪಿ ಪಂಪನ್ನು ದುರಸ್ಥಿಗೊಳಿಸಿ ಪೈಪಲೈನ ನಲ್ಲಿರುವ ಸೋರಿಕೆಯನ್ನು ಕಂಡುಹಿಡಿದು, ಅದನ್ನು ಸರಿಪಡಿಸಿ, ಒಂದು ಪೈಪಿಂಗ್ ಸಿಸ್ಟಂನ್ನು ಪಂಪ್‌ನಿಂದ ಚಾಲನೆಗೊಳಿಸಿದಾಗ ಆ ಪಂಪ್‌ಗೆ ಎಷ್ಟು ಸಾಮರ್ಥ್ಯವಿದೆಯೋ ಅಷ್ಟು ನೀರು ಹೋಗಿ ಉಳಿದ ನೀರು ಮತ್ತೆ ಪೋಲಾಗುತ್ತಿತ್ತು. ಆದ್ದರಿಂದ ಇನ್ನೊಂದು 40 ಹೆಚ್. ಪಿ ಪಂಪ ಮೋಟಾರನ್ನು ಅಳವಡಿಸಿ ಚಾಲನೆಗೊಳಿಸಿದಾಗ ಬ್ಯಾಕ್ ವಾಶ್ ಆದ ನೀರು ಪೋಲಾಗುವುದು ತಪ್ಪಿತು. ಆ ಬ್ಯಾಕ್ ವಾಶ್ ಆದ ನೀರನ್ನು ಮತ್ತೆ ಏರಿಯೇಟರನಲ್ಲಿ ಬಿಟ್ಟು ವಿವಿಧ ಹಂತಗಳಲ್ಲಿ ನೀರನ್ನು ಸಂಸ್ಕರಿಸಿ ಮರುಬಳಕೆಗೆ ಶುದ್ದೀಕರಿಸಿ ನಗರದ ಜಿಎಲ್‌ಎಸ್‌ಆರ್ ಗಳಿಗೆ ಸರಬರಾಜು ಮಾಡಿ ನಂತರ ನಗರದ ವಿವಿಧ ನೀರು ಸರಬರಾಜು ಪೈಪಲೈನ್ ಬಳ್ಳಿಗಳಿಗೆ ನೀರು ಸರಬರಾಜು ಮಾಡಿರುವುದರಿಂದ ಬೇಸಿಗೆ ಕಾಲದಲ್ಲಿ ನೀರು ಸಮರ್ಪಕವಾಗಿ ಸರಬರಾಜು ಮಾಡಲು ಸಾಧ್ಯವಾಯಿತೆನ್ನಬಹುದು.

ಪ್ರಕಾಶ. ಸಿ. ಕೋಷ್ಠಿ